ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.

ಸಂಖ್ಯೆ: ಸಿ7(8)/ಆರ್.ಟಿ.ಇ./ಶು.ಮ./ತಂ.ಬಿಡು/2020-21 ದಿನಾಂಕ: 01.02.2021

## :: ಸುತ್ತೋಲೆ ::

ವಿಷಯ : 2020-21ನೇ ಸಾಲಿನ ಆರ್.ಟಿ.ಇ. ಶುಲ್ಕ ಮರುಪಾವತಿಗೆ ತಂತ್ರಾಂಶದ ಮೂಲಕ ಬೇಡಿಕೆ ಸಲ್ಲಿಸಲು ಅಂತಿಮ ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ.

ಉಲ್ಲೇಖ : ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 02.01.2021.

* * * * * *

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖದ ಸುತ್ತೋಲೆಯನ್ವಯ ಶಿಕ್ಷಣ ಹಕ್ಕು ಕಾಯ್ದೆ 2009ರ ಸೆಕ್ಷನ್ 12(1)(ಸಿ)ರಡಿ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ 2020-21ನೇ ಸಾಲಿನ ಶುಲ್ಕ ಮರುಪಾವತಿಗೆ ಅನುದಾನರಹಿತ ಖಾಸಗಿ ಶಾಲೆಗಳು ಆನ್‌ಲೈನ್ ಮೂಲಕ ಬೇಡಿಕೆ ಸಲ್ಲಿಸಲು ದಿನಾಂಕ : 04.01.2021 ರಿಂದ 04.02.2021ರವರೆಗೆ ತಂತ್ರಾಂಶ ಬಿಡುಗಡೆ ಮಾಡಲಾಗಿದೆ. ಶುಲ್ಕ ಮರುಪಾವತಿಗೆ ಶೇಕಡಾ 83ರಷ್ಟು ಶಾಲೆಗಳು ಇದುವರೆಗೂ ಬೇಡಿಕೆ ಸಲ್ಲಿಸದ ಕಾರಣ ಅಂತಿಮ ದಿನಾಂಕವನ್ನು 04.03.2021ವರೆಗೆ ವಿಸ್ತರಿಸಿದೆ. ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಈ ಕುರಿತು ವೈಯಕ್ತಿಕ ಗಮನಹರಿಸಿ ವ್ಯಾಪಕ ಪ್ರಚಾರ ನೀಡಿ, ಖಾಸಗಿ ಅನುದಾನ ರಹಿತ ಶಾಲೆಗಳು ಶುಲ್ಕ ಮರುಪಾವತಿ ಬೇಡಿಕೆ ಸಲ್ಲಿಸಲು ಅಗತ್ಯ ಕ್ರಮವಹಿಸುವುದು.

[ಮಾನ್ಯ ಆಯುಕ್ತರ ಅನುಮೋದನೆ ಮೇರೆಗೆ)

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ತಾಲ್ಲೂಕು/ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ
3. ಹಿರಿಯ ಸಹಾಯಕ ನಿರ್ದೇಶಕರು, ಇ ಆಡಳಿತ ಶಾಖೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಸೂಕ್ತ ಕ್ರಮಕ್ಕಾಗಿ
4. ಹಿರಿಯ ಕಾರ್ಯಕ್ರಮಾಧಿಕಾರಿಗಳು/ಪ್ರೋಗ್ರಾಮರ್ಸ್, ಎಸ್.ಎ.ಟಿ.ಎಸ್. ವಿಭಾಗ, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ
5. ರಾಜ್ಯದ ಎಲ್ಲಾ ಅಲ್ಪ ಸಂಖ್ಯಾತವಲ್ಲದ ಅನುದಾನರಹಿತ ಖಾಸಗಿ ಶಾಲಾ ಮುಖ್ಯಸ್ಥರು/ಆಡಳಿತ ಮಂಡಳಿಯವರಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ

**ಪ್ರತಿಯನ್ನು ಮಾಹಿತಿಗಾಗಿ,**

1. ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ವಿಭಾಗ
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ವಿಭಾಗ
4. ಕಛೇರಿ ಪ್ರತಿ.